ಪಶು ಆಸ್ಪತ್ರೆ ಮಂಜೂರಾತಿ ಬಗ್ಗೆ

39 (9): ಶ್ರೀ ಎಂ. ಟಿ.ಕೃಷ್ಣಪ್ಪ (ತುರುವೇಕೆರೆ): ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕಿನ ಕಣತ್ತೂರು ಗ್ರಾಮ ದೊಂಬರಹಳ್ಳಿ ಗ್ರಾಮಕ್ಕೆ ಪಶುಸಂಗೋಪನೆ ಆಸ್ಪತ್ರೆಯನ್ನು ಮಂಜೂರು ಮಾಡಲಾಗಿದೆಯೇ;

ಆ) ಹಾಗಿದ್ದಲ್ಲಿ, ಆಸ್ಪತ್ರೆಯ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು ಹಾಗೂ ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ರೇವುನಾಯಕ ಬೆಳಮಗಿ (ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಸೃಷ್ಟಿಯಾಗಿರುವ ಉದ್ಯೋಗ ಮತ್ತು ರಫ್ತಿನ ಬಗ್ಗೆ

40 (79): ಶ್ರೀ ಜಯಚಂದ್ರ ಟಿ.ಬಿ. (ಶಿರಾ): ಮಾನ್ಯ ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ ಧಾರ್ಮಿಕ ದತ್ತಿ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಅಡಿಯಲ್ಲಿ ರಾಜ್ಯದಲ್ಲಿ ಹೂಡಿದ ಬಂಡವಾಳವೆಷ್ಟು?

ಆ) ಇದರಿಂದಾಗಿ ಎಷ್ಟು ಜನಕ್ಕೆ ಉದ್ಯೋಗ ಅವಕಾಶವನ್ನು ಕಲ್ಪಿಸಲಾಗಿದೆ. ಇತ್ತೀಚೆಗೆ ಅಮೆರಿಕದಲ್ಲಿ ಪ್ರಕಟಿಸಿದ ಹೊರಗುತ್ತಿಗೆಯ ನೀತಿಯ ಬದಲಾವಣೆ ಯಿಂದಾಗಿ ರಾಜ್ಯಕ್ಕೆ ತೊಂದರೆಯಾಗಿದೆಯೇ, ಹಾಗಿದ್ದಲ್ಲಿ, ಇದನ್ನು ಹೋಗಲಾಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಡಾ. ವಿ.ಎಸ್.ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ ಧಾರ್ಮಿಕ ದತ್ತಿ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಸಚಿವರು) :

ಅ) ಐ.ಟಿ. ವಲಯದಲ್ಲಿ ಪ್ರತಿ ವರ್ಷ ಸುಮಾರು ರೂ.4000 ಕೋಟಿ ಹೂಡಿಕೆಯಾಗುತ್ತಿದೆ. 2009–10ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒಟ್ಟು ರೂ. 4493.10 ಕೋಟಿ ಐ.ಟಿ. ವಲಯದಲ್ಲಿ ಹೂಡಿಕೆಯಾಗಿರುತ್ತದೆ.

ಜೈವಿಕ ತಂತ್ರಜ್ಞಾನ ವಲಯದಲ್ಲಿ ಸುಮಾರು ರೂ.1000 ಕೋಟಿ ಪ್ರತಿ ವರ್ಷ ಹೂಡಿಕೆಯಾಗುತ್ತಿದೆ. 2009–10ನೇ ಸಾಲಿನ ಆರ್ಥಿಕ ವರ್ಷದಲ್ಲಿ ರೂ. 1100 ಕೋಟಿ ಹೂಡಿಕೆಯಾಗಿರುತ್ತದೆ.

ಆ) ಪ್ರತಿ ವರ್ಷ ಐಟಿ ವಲಯದಲ್ಲಿ ಸುಮಾರು 45000– 50000 ಜನರಿಗೆ ಉದ್ಯೋಗ ನೀಡಲಾಗುತ್ತಿದೆ.

2009–10ನೇ ಸಾಲಿನ ಆರ್ಥಿಕ ವರ್ಷದಲ್ಲಿ ಸುಮಾರು 48000 ಜನರಿಗೆ ಐಟಿ ವಲಯದಲ್ಲಿ ಉದ್ಯೋಗ ಕಲ್ಪಿಸಲಾಗುತ್ತಿದೆ.

ಬಿ.ಟಿ. ವಲಯದಲ್ಲಿ ಪ್ರತಿ ವರ್ಷ ಸುಮಾರು 2000 ಜನರಿಗೆ ಉದ್ಯೋಗ ಕಲ್ಪಿಸಲಾಗುತ್ತಿದೆ.

2009–10ನೇ ಸಾಲಿನ ಆರ್ಥಿಕ ವರ್ಷದಲ್ಲಿ ಸುಮಾರು 2200 ಜನರಿಗೆ ಉದ್ಯೋಗ ಕಲ್ಪಿಸಲಾಗಿದೆ.

ಅಮೆರಿಕ ದೇಶವು ಇತ್ತೀಚೆಗೆ ಘೋಷಿಸಿರುವ ಹೊರಗುತ್ತಿಗೆಯ ಹೊಸ ನೀತಿಯು ನಮ್ಮ ರಾಜ್ಯದ ಮೇಲೆ ಯಾವುದೇ ಬೃಹತ್ ಪರಿಣಾಮ ಬೀರುವುದಿಲ್ಲ.

ನಬಾರ್ಡ್ ರಸ್ತೆಗಳ ಮಂಜೂರಾತಿ ಬಗ್ಗೆ

42 (218): ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ ವಿಧಾನಸಭಾ ಕ್ಷೇತ್ರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಾಗಡಿ ವಿಧಾನಸಭಾ ಕ್ಷೇತ್ರಕ್ಕೆ 2006ರಿಂದ ಇಲ್ಲಿಯವರೆಗೆ ನಬಾರ್ಡ್ ಯೋಜನೆಯಡಿಯಲ್ಲಿ ಯಾವ್ಯಾವ ರಸ್ತೆಗಳನ್ನು ಮಂಜೂರು ಮಾಡಲಾಗಿದೆ?

ಆ) ಮಂಜೂರು ಮಾಡಿರುವ ಎಲ್ಲಾ ರಸ್ತೆಗಳ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ? ಪೂರ್ಣಗೊಳಿಸದಿರುವ ರಸ್ತೆಗಳು ಯಾವುವು? ಈ ರಸ್ತೆಗಳಿಗೆ ನಿಗದಿಪಡಿಸಿದ ಹಣವೆಷ್ಟು? ಎಷ್ಟು ಹಣವನ್ನು ಬಿಡುಗಡೆ ಗೊಳಿಸಲಾಗಿದೆ? ರಸ್ತೆವಾರು ಪ್ರತ್ಯೇಕ ವಿವರ ನೀಡುವುದು;

ಇ) ಈ ರಸ್ತೆಗಳ ನಿರ್ವಹಣೆಯನ್ನು (ನಿರ್ವಹಣೆ ಅವಧಿ) ಎಷ್ಟು ವರ್ಷ ಅವಧಿಗೆ ಗುತ್ತಿಗೆದಾರರಿಗೆ ನೀಡಲಾಗಿದೆ? ಎಷ್ಟು ರಸ್ತೆಗಳನ್ನು ನಿರ್ವಹಣೆ ಮಾಡಿದ್ದಾರೆ?